ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೩

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**
**(ಮುಂದುವರೆದ ಉಪವೇಶನ)**
**ಗುರುವಾರ, ದಿನಾಂಕ: ೧೯ನೇ ಮಾರ್ಚ್, ೨೦೧೫**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

## ಬೆಂಗಳೂರು ನಗರದಲ್ಲಿ ಪಾದಚಾರಿಗಳ ಸುರಕ್ಷತೆ ಮತ್ತು ಮಾರ್ಗ ಒತ್ತುವರಿ ತೆರವು

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೮೧ (೧೮೧೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿ ಪಾದಚಾರಿ ಮಾರ್ಗಗಳು ಒತ್ತುವರಿಯಾಗಿ ನಾಗರೀಕರು ರಸ್ತೆ ದಾಟಲು ಆಗುತ್ತಿರುವ ಅನಾನುಕೂಲವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ರಾಜ್ಯ ಹೈಕೋರ್ಟ್ ಆದೇಶದಂತೆ ಕ್ರಮ ಕೈಗೊಳ್ಳುವಲ್ಲಿ ಇದುವರೆಗಿನ ಪ್ರಗತಿ ಏನು ;

(ಆ) ಶೀಘ್ರ ಒತ್ತುವರಿಯಾಗಿರುವ ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲು ಮತ್ತು ಸುರಕ್ಷಿತ ರಸ್ತೆಯನ್ನಾಗಿಸುವಲ್ಲಿ ಸರ್ಕಾರದ ತುರ್ತು ಕ್ರಮಗಳು ಏನು ; (ಮಾಹಿತಿ ಒದಗಿಸುವುದು)

(ಇ) ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಹೋಗುವ ಮತ್ತು ಅಲ್ಲಿಂದ ಬರುವ ರಸ್ತೆ ಮತ್ತು ಪಾದಚಾರಿ ಮಾರ್ಗಗಳೆರಡೂ ಅತಿಕ್ರಮಣವಾಗಿರುವುದರಿಂದ ಪಾದಚಾರಿಗಳು ಮತ್ತು ವಾಹನಗಳು ಚಲಿಸಲು ಇರುವ ತೊಂದರೆಯನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ತುರ್ತು ಕ್ರಮಗಳು ಏನು ? (ವಿವರ ಒದಗಿಸುವುದು)

## ಹನುಮಗಿರಿ ಬೆಟ್ಟ ಕಬಳಿಕೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೧೮೨ (೧೫೩೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು, ರಾಜರಾಜೇಶ್ವರಿನಗರ ವಲಯದ ಸರ್ವೆ ನಂ. ೧೬೮ರಲ್ಲಿನ 'ಹನುಮಗಿರಿ ಬೆಟ್ಟ'ದ ಜಾಗವನ್ನು ವ್ಯವಸಾಯೇತರ ಪ್ರದೇಶವನ್ನಾಗಿ ಭೂ ಪರಿವರ್ತನೆಗೊಳಿಸಿ, ಖಾತಾ ಮಾಡಿಕೊಡಲಾಗಿದೆಯೇ ;

(ಆ) ಕರ್ನಾಟಕ ಭೂ ಕಂದಾಯ ಕಾಯಿದೆ ಪ್ರಕಾರ ಎಲ್ಲ ಬೆಟ್ಟಗುಡ್ಡಗಳು ಸರ್ಕಾರಿ 'ಬಿ' ಕರಾಬು ಸ್ವತ್ತು ಆಗಿರುತ್ತದೆ ಎಂಬುದು ನಿಜವೇ ;

(ಇ) ಸರ್ಕಾರಿ 'ಬಿ' ಕರಾಬು ಸ್ವತ್ತಾದ 'ಹನುಮಗಿರಿ ಬೆಟ್ಟ'ಕ್ಕೆ ಹೇಗೆ ಭೂ ಪರಿವರ್ತನೆಗೊಳಿಸಿ, ಖಾತಾ ಮಾಡಿ ಕೊಡಲಾಗಿದೆ ;

ಈ) ಈ ಭೂಮಿಯ ಮಾರಾಟ, ಕಟ್ಟಡಗಳ ನಿರ್ಮಾಣ, ನಕ್ಷೆ ಮಂಜೂರಾತಿ ಇತ್ಯಾದಿ ಪ್ರಕ್ರಿಯೆಗಳು ಕ್ರಮಬದ್ಧವಾಗಿವೆಯೇ ;

ಉ) ಈ ಭೂಮಿಯ ಪರಭಾರೆ ಇತ್ಯಾದಿ ವಹಿವಾಟುಗಳಲ್ಲಿ ಯಾರು ಪಾಲುದಾರರು ;

ಊ) ಸರ್ಕಾರ ಈ ವಹಿವಾಟಿನ ಅವ್ಯವಹಾರಗಳ ಬಗ್ಗೆ ತನಿಖೆ ಏನಾದರೂ ಕೈಗೊಂಡಿದೆಯೇ ?

## ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೮೩ (೧೩೮೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯದ ಕಾರ್ಯ ಚಟುವಟಿಕೆಗಳೇನು ;

(ಆ) ರಾಜ್ಯದ ಯಾವ ಯಾವ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯದ ವಲಯ ಕಛೇರಿಗಳನ್ನು ಪ್ರಾರಂಭಿಸಲಾಗಿದೆ ; ಈ ಪ್ರಯೋಗಾಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಬೆಂಗಳೂರಿನ ಕರ್ನಾಟಕ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯದ ಕೇಂದ್ರ ಕಛೇರಿಯಲ್ಲಿ ಎ, ಬಿ, ಸಿ ದರ್ಜೆ ಹಾಗೂ ತಾಂತ್ರಿಕ ಸಿಬ್ಬಂದಿಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂದಿದ್ದಲ್ಲಿ, ಅಪರಾಧ ಪ್ರಕರಣಗಳಿಗೆ ಸಂಬಂಧಪಟ್ಟಂತೆ ವೈಜ್ಞಾನಿಕವಾಗಿ ಸಾಕ್ಷಿಗಳನ್ನು ಕಂಡು ಹಿಡಿಯಲು ಸಮಯಾಭಾವ ಉಂಟಾಗಿ ಅಪರಾಧಿಗಳಿಗೆ ಶಿಕ್ಷೆ ಕೊಡಿಸುವಲ್ಲಿ ತಡವಾಗುವ ಸಂಗತಿ ಸರ್ಕಾರದ ಗಮನದಲ್ಲಿದೆಯೇ ;

ಉ) ಕೊಲೆ, ಅತ್ಯಾಚಾರ ವಿವಿಧ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಬೆಂಗಳೂರು ಹಾಗೂ ವಿವಿಧ ವಲಯ ಕಛೇರಿಗಳಲ್ಲಿ ಕರ್ನಾಟಕ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯದ ವತಿಯಿಂದ ಸಾಕ್ಷಿ/ವರದಿಗಳನ್ನು ಸಂಗ್ರಹಿಸಿ ಅಪರಾಧಿಗಳ ಮೇಲೆ ಕ್ರಮ ಕೈಗೊಳ್ಳಲು ಸಲ್ಲಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

ಊ) ಈ ನಿಟ್ಟಿನಲ್ಲಿ ಬೆಂಗಳೂರಿನ ಕರ್ನಾಟಕ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯದ ಕೇಂದ್ರ ಕಛೇರಿಯಲ್ಲಿ ಖಾಲಿ ಇರುವ ಲಿಪಿಕ ಸಿಬ್ಬಂದಿ/ ತಾಂತ್ರಿಕ ಸಿಬ್ಬಂದಿಗಳ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಮರಳು ಹಂಚಿಕೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೮೪ (೧೭೪೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮರಳು ಹಂಚಿಕೆಯ ಪ್ರಕ್ರಿಯೆಯಲ್ಲಿ (ಈ ಟೆಂಡರ್) ಬ್ಲಾಕ್‌ಗಳನ್ನು ವಿಭಾಗ ಮಾಡಲಾಗಿದೆಯೇ ;

(ಆ) ಎಷ್ಟು ಬ್ಲಾಕ್‌ಗಳನ್ನು ವಿಭಾಗಪಡಿಸಲಾಗಿದೆ ; ಇವುಗಳಲ್ಲಿ ಎಷ್ಟು ಬ್ಲ್ಯಾಕ್‌ಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಿಡಲಾಗಿದೆ ;

(ಇ) ಮರಳು ಹಂಚಿಕೆಯ ಬ್ಲಾಕ್‌ಗಳನ್ನು ವಿಭಾಗ ಮಾಡಿ ಟೆಂಡರ್ ಮುಖಾಂತರ ಹಂಚುವಿಕೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಎಷ್ಟು ಬ್ಲ್ಯಾಕ್‌ಗಳನ್ನು ಎಲ್ಲೆಲ್ಲಿ ಹಂಚಿಕೆ ಮಾಡಲಾಗಿದೆ ?

## ಜ್ಯೋತಿ ಸಂಜೀವಿನಿ ಯೋಜನೆ ಜಾರಿ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೮೫ (೧೪೩೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದವರಿಗೆ ಜಾರಿಗೆ ತಂದಿರುವ ''ಜ್ಯೋತಿ ಸಂಜೀವಿನಿ'' ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲಾಗಿದೆ ; ಇದರ ಮಾರ್ಗಸೂಚಿಯನ್ನು ಒದಗಿಸುವುದು ಮತ್ತು ಇಲ್ಲಿಯವರೆಗೆ ಎಷ್ಟು ಜನ ಈ ಯೋಜನೆಯ ಲಾಭ ಪಡೆದಿದ್ದಾರೆ ;

(ಆ) ಜ್ಯೋತಿ ಸಂಜೀವಿನಿ ಯೋಜನೆಗೆ ಒಳಪಡುವ ರಾಜ್ಯದಲ್ಲಿರುವ ಮತ್ತು ಹೊರ ರಾಜ್ಯದಲ್ಲಿರುವ ಆಸ್ಪತ್ರೆಗಳ ಪಟ್ಟಿಯನ್ನು ಒದಗಿಸುವುದು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಸೈಟ್ ದಾಖಲೆಗಳು ಕಳ್ಳತನವಾಗಿರುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೮೬ (೧೩೭೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದ ಅತ್ಯಂತ ಪ್ರಮುಖ ಸಂಸ್ಥೆಯಾದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಇದುವರೆವಿಗೂ ಎಷ್ಟು ಸೈಟ್ ದಾಖಲೆಗಳು ಕಳ್ಳತನವಾಗಿರುವ ಪ್ರಕರಣಗಳು ಪತ್ತೆಯಾಗಿವೆ ; (ವಿವರ ನೀಡುವುದು)

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸೈಟ್ ದಾಖಲೆ ಕಳ್ಳತನದ ಪ್ರಕರಣದಲ್ಲಿ ಬಂಧಿತ ಅಪರಾಧಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸೈಟ್ ದಾಖಲೆ ಕಳ್ಳತನದ ಎಷ್ಟು ಪ್ರಕರಣದಲ್ಲಿ ಸಾರ್ವಜನಿಕರಿಗೆ ಸರ್ಕಾರದಿಂದ ನ್ಯಾಯ ದೊರಕಿಸಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಐ.ಎ.ಎಸ್., ಕೆ.ಎ.ಎಸ್., ಅಧಿಕಾರಿಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೧೮೭ (೧೮೯೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಐ.ಎ.ಎಸ್., ಕೆ.ಎ.ಎಸ್., ಹುದ್ದೆಗಳನ್ನು ಸೃಜಿಸಲಾಗಿದೆ ; ಆ ಪೈಕಿ ಖಾಲಿ ಇರುವ ಹುದ್ದೆಗಳು ಯಾವುವು ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಐ.ಎ.ಎಸ್., ಕೆ.ಎ.ಎಸ್., ಅಧಿಕಾರಿಗಳ ಕೊರತೆ ಇದೆಯೇ ; ಇದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಯೋಜನೆ ಮತ್ತು ಯೋಜನೇತರ ಕಾರ್ಯಕ್ರಮಗಳಿಗೆ ನಿಗದಿಪಡಿಸಿರುವ ಅನುದಾನ ಕುರಿತು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೧೮೮ (೧೯೨೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ನೇ ಸಾಲಿನ ಆಯವ್ಯಯದಲ್ಲಿ ಯೋಜನೆ ಮತ್ತು ಯೋಜನೇತರ ಕಾರ್ಯಕ್ರಮಗಳಿಗೆ ನಿಗದಿಪಡಿಸಿರುವ ಅನುದಾನದ ಇಲಾಖಾವಾರು ವಿವರ ನೀಡುವುದು ;

(ಆ) ಆಯವ್ಯಯದಲ್ಲಿ ನಿಗದಿ ಮಾಡಲಾದಂತೆ ಅನುದಾನ ಬಿಡುಗಡೆ ಮಾಡಲಾಗಿದೆಯೇ, ಇಲಾಖಾವಾರು ಯೋಜನೆ ಹಾಗೂ ಯೋಜನೇತರ ಮಾಹಿತಿ ನೀಡುವುದು ;

(ಇ) ಈ ವರ್ಷದಲ್ಲಿ ಇಲಾಖಾವಾರು ಬಿಡುಗಡೆ ಮಾಡಲಾದ ಅನುದಾನ ಹಾಗೂ ವೆಚ್ಚದ ವಿವರ ನೀಡುವುದು ;

ಈ) ಆಯವ್ಯಯದಲ್ಲಿ ಅನುದಾನ ನಿಗದಿಪಡಿಸಿದಂತೆ ಬಿಡುಗಡೆ ಮಾಡಲಾಗದಿದ್ದಲ್ಲಿ ಕಾರಣಗಳೇನು ?

## ಕೆಂಪೇಗೌಡ ಬಡಾವಣೆ ನಿರ್ಮಾಣ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೧೮೯ (೧೮೫೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನಾಡಪ್ರಭು ಕೆಂಪೇಗೌಡ ಬಡಾವಣೆ ನಿರ್ಮಾಣಕ್ಕಾಗಿ ಎಷ್ಟು ಎಕರೆ ಭೂಮಿಯನ್ನು ಎಲ್ಲಿ ಸ್ವಾಧೀನಪಡಿಸಿಕೊಂಡಿದೆ ; ಈ ಬಡಾವಣೆಯ ಕಾಮಗಾರಿ ಯಾವ ಹಂತದಲ್ಲಿದೆ ; ಯಾವಾಗ ಮುಕ್ತಾಯಗೊಳ್ಳಲಿದೆ ;

(ಆ) ನಾಡಪ್ರಭು ಕೆಂಪೇಗೌಡ ಬಡಾವಣೆ ನಿರ್ಮಾಣಕ್ಕಾಗಿ ಯಾವ ಯಾವ ಕಾಮಗಾರಿಗಳಿಗೆ ಟೆಂಡರ್‌ಗಳನ್ನು ಕರೆಯಲಾಗಿದೆ ; ಟೆಂಡರ್‌ಗೆ ನಿಗದಿಪಡಿಸಿರುವ ಮೊತ್ತ ಎಷ್ಟು ; (ಕಾಮಗಾರಿಗಳವಾರು ವಿವರಗಳನ್ನು ನೀಡುವುದು)

(ಇ) ನಕಲಿ ದಾಖಲೆಗಳನ್ನು ನೀಡಿ ಗುತ್ತಿಗೆ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಕಲಿ ದಾಖಲೆಗಳನ್ನು ನೀಡಿ ಗುತ್ತಿಗೆ ಪಡೆದಿರುವ ಗುತ್ತಿಗೆದಾರರು ಯಾರು ; ಈ ಗುತ್ತಿಗೆದಾರರಿಗೆ ಬಿ.ಡಿ.ಎ.ಯಿಂದ ಈವರೆಗೆ ಎಷ್ಟು ಮೊತ್ತದ ಯಾವ್ಯಾವ ಕಾಮಗಾರಿಗಳನ್ನು ಗುತ್ತಿಗೆಗೆ ನೀಡಲಾಗಿದೆ ; (ಕಾಮಗಾರಿವಾರು ಮಾಹಿತಿ ನೀಡುವುದು)

ಈ) ನಕಲಿ ದಾಖಲೆಗಳನ್ನು ನೀಡಿ ಕಾಮಗಾರಿಯ ಗುತ್ತಿಗೆ ಪಡೆದಿರುವುದು ಸಾಬೀತಾಗಿದ್ದರೂ ಸಹ ಅಂತಹ ಗುತ್ತಿಗೆದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸದೆ, ಅವರು ಪಡೆದಿದ್ದ ಗುತ್ತಿಗೆಯನ್ನು ಮಾತ್ರ ರದ್ದುಪಡಿಸಲು ಕಾರಣವೇನು ; ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವ ಕುರಿತು ಸರ್ಕಾರದ ನಿಲುವೇನು ?

## ಉಡುಪಿ ಜಿಲ್ಲೆಯಲ್ಲಿನ ಅಕ್ರಮ ಗಣಿಗಾರಿಕೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೯೦ (೧೮೦೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಡುಪಿ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಗಣಿಗುತ್ತಿಗೆ ಪರವಾನಿಗೆದಾರರಿಂದ ಸರ್ಕಾರದ ಬೊಕ್ಕಸಕ್ಕೆ ಬರಬೇಕಾದ ಒಟ್ಟು ಮೊತ್ತ ಎಷ್ಟು ; (ತಾಲ್ಲೂಕುವಾರು, ಪ್ರಕರಣವಾರು, ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಆ) ಈ ಬಾಕಿಯನ್ನು ವಸೂಲು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಗಣಿ ಅಕ್ರಮದಾರರೊಂದಿಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿಗಳ ಶಾಮೀಲಾತಿಯನ್ನು ಸಾಬೀತುಪಡಿಸಲು ಅವರ ಮೊಬೈಲ್‌ಗಳ ಒಳ ಹಾಗೂ ಹೊರ ಕರೆಗಳನ್ನು ತನಿಖೆಗೆ ಒಳಪಡಿಸಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ;

ಈ) ಕೋಟ್ಯಾಂತರ ರೂಪಾಯಿಗಳ ಸರ್ಕಾರದ ಸ್ವತ್ತು ನಾಶವಾಗುತ್ತಿದ್ದರೂ ಸಹ ಇದರ ಬಗ್ಗೆ ನಿರ್ಲಿಪ್ತತೆಯನ್ನು ತೋರುತ್ತಿರುವ ಅಧಿಕಾರಿಗಳ ಧೋರಣೆ ಕರ್ತವ್ಯಲೋಪ ಹಾಗೂ ಭ್ರಷ್ಟಾಚಾರಕ್ಕೆ ಪೂರಕವಲ್ಲವೇ ; ಇಂತಹ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳಲಾಗುವುದೇ ?

## ಹೊಸ ಬಡಾವಣೆಗಳ ನಿರ್ಮಾಣ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೯೧ (೧೮೪೭) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಲವಾರು ವರ್ಷಗಳಿಂದ ಜನಸಂಖ್ಯೆಗೆ ಅನುಗುಣವಾಗಿ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಹೊಸ ಬಡಾವಣೆಗಳ ನಿರ್ಮಾಣ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ನಿವೇಶನ ಸಿಗದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಪ್ರಾಧಿಕಾರದಿಂದ ಹೊಸದಾಗಿ ಬಡಾವಣೆಗಳ ನಿರ್ಮಾಣಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಪ್ರಸ್ತುತ ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ, ಯಾವಾಗ ಅನುಮೋದನೆ ನೀಡಲಾಗುವುದು ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೨ (೧೮೯೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ ನಡೆದಿರುವುದು ಮತ್ತು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಕಾಮಗಾರಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದೆ ; ಅದರಲ್ಲಿ ಕಳಪೆ ಕಾಮಗಾರಿಗಳ ಸಂಖ್ಯೆ ಎಷ್ಟು ; ಕಳಪೆ ಕಾಮಗಾರಿಗಳಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ;

(ಇ) ಕಳಪೆ ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರು ಮತ್ತು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ; ಕಳಪೆ ಕಾಮಗಾರಿಯನ್ನು ಗುಣಮಟ್ಟಕ್ಕೆ ಸರಿಮಾಡಲು ತಗಲುವ ವೆಚ್ಚವೆಷ್ಟು ; ಯಾವ ಯಾವ ವಾರ್ಡ್‌ಗಳಲ್ಲಿ ಯಾವ ಯಾವ ಕಾಮಗಾರಿ ಕಳಪೆ ಗುಣಮಟ್ಟದ್ದಾಗಿರುತ್ತದೆ ; ಇದಕ್ಕೆ ಖರ್ಚಾಗಿರುವ ಒಟ್ಟು ಮೊತ್ತ ಎಷ್ಟು ;

ಈ) ಆ ಕಳಪೆ ಕಾಮಗಾರಿಯ ನಷ್ಟವನ್ನು ಗುತ್ತಿಗೆದಾರರಿಂದ ಮತ್ತು ಅಧಿಕಾರಿಗಳಿಂದ ವಸೂಲಿ ಮಾಡಲು ಸರ್ಕಾರ ಕ್ರಮ ಜರುಗಿಸಿದೆಯೇ ? (ಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿರುವ ಎ.ಟಿ.ಎಂ.ಗಳ ಸುರಕ್ಷತೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೯೩ (೧೯೩೪) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೦೨ ವರ್ಷಗಳಿಂದ ರಾಜ್ಯದಲ್ಲಿರುವ ಎಟಿಎಂಗಳಲ್ಲಿ ಗ್ರಾಹಕರ ಹಾಗೂ ಭದ್ರತಾ ಸಿಬ್ಬಂದಿಗಳ ಮೇಲೆ ಹಲ್ಲೆ ನಡೆಸಿ ಹಣ ದೋಚಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ರಾಜ್ಯದೆಲ್ಲೆಡೆ ಕಾವಲುಗಾರರಿಲ್ಲದ ಎಷ್ಟು ಎಟಿಎಂಗಳನ್ನು ಮುಚ್ಚಲಾಗಿದೆ ;

(ಆ) ಬೆಂಗಳೂರಿನಲ್ಲಿ ಇತ್ತೀಚೆಗೆ ಕಾರ್ಪೊರೇಷನ್ ಕಛೇರಿ ಬಳಿ ನಡೆದ ಎಟಿಎಂನಲ್ಲಿ ಮಹಿಳೆಯ ಮೇಲೆ ನಡೆದ ಹಲ್ಲೆಯ ಸಂಬಂಧ ಆರೋಪಿಯನ್ನು ಬಂಧಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು ; ಪ್ರಸ್ತುತ ತನಿಖೆಯು ಯಾವ ಹಂತದಲ್ಲಿದೆ ;

(ಇ) ಎಟಿಎಂನಲ್ಲಿ ಗ್ರಾಹಕರಿಗೆ ಶಾಶ್ವತವಾಗಿ ಸುರಕ್ಷತೆಯನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಉತ್ತರ ಕರ್ನಾಟಕದಲ್ಲಿ ರೇಷ್ಮೆ ಕೈಗಾರಿಕೆ ಪ್ರೋತ್ಸಾಹಿಸುವ ಬಗ್ಗೆ

**ಡಾ. ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೪ (೧೮೧೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅಭಿವೃದ್ಧಿ ವಂಚಿತ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ರೇಷ್ಮೆ ಬೆಳೆ ಪ್ರೋತ್ಸಾಹಿಸಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು ;

(ಆ) ಸದರಿ ಜಿಲ್ಲೆಗಳಲ್ಲಿ ರೇಷ್ಮೆ ಕೈಗಾರಿಕೆ ಅಭಿವೃದ್ಧಿಗಾಗಿ ವಿಶೇಷ ಸೌಲಭ್ಯಗಳನ್ನು ಒದಗಿಸಲಾಗುವುದೇ ;

(ಇ) ಈ ಭಾಗದ ಯಾವ ಯಾವ ಸ್ಥಳಗಳಲ್ಲಿ ರೇಷ್ಮೆ ಅಭಿವೃದ್ಧಿ / ತರಬೇತಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ?

## ಮೆಟ್ರೋ ರೈಲು ನಿಗಮದ ನೌಕರರ ಮುಂಬಡ್ತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೧೯೫ (೧೯೦೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL)ದ ನೌಕರರ ಮುಂಬಡ್ತಿಗೆ ಇರುವ ಮಾನದಂಡಗಳೇನು ;

(ಆ) ನೌಕರರ ಮುಂಬಡ್ತಿಗೆ ಆಂತರಿಕ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕೆ.ಸಿ.ಎಸ್.ಆರ್. ನಿಯಮಗಳನ್ವಯ ಮಾಡಲಾಗುತ್ತಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) BMRCL ಸಂಸ್ಥೆಯು ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಮಾತ್ರ ಪಾಲಿಸಿ, ಮುಂಬಡ್ತಿ ನಿಯಮಗಳನ್ನು ಪಾಲಿಸದಿರಲು ಕಾರಣಗಳೇನು ;

ಈ) ನಿಗಮದ ರೈಲು ಚಾಲಕರ ವೇತನವನ್ನು ಕೆ.ಎಸ್.ಆರ್.ಟಿ.ಸಿ. ವಾಹನ ಚಾಲಕರ ವೇತನಕ್ಕೆ ಹೋಲಿಕೆ ಮಾಡಿರುವುದು ಸರಿಯೇ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. ಪಿಡಬ್ಲ್ಯೂಎಸ್–1224 – ಪ್ರತಿಗಳು – 1500 – ಪಿ2